ಫ್ಯಾಕ್ಸ್ : 0816-2255761
ದೂರವಾಣಿ : 2272280

# ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ

ಬೆಳಗುಂಬ ರಸ್ತೆ, ತುಮಕೂರು – 572 103

## ಅಂತಿಮ ವಿನ್ಯಾಸ ಅನುಮೋದನೆ ಆದೇಶ

**ವಿಷಯ :** ತುಮಕೂರು ನಗರದ **ಗೆದ್ದಲಹಳ್ಳಿ** ಗ್ರಾಮದ ಸರ್ವೆ ನಂಬರ್ **25/7** ರಲ್ಲಿ **ಒಟ್ಟು 0-34.08 ಗುಂಟೆ** ಪ್ರದೇಶಕ್ಕೆ ವಾಸದ ಉಪಯೋಗಕ್ಕೆ ಅಂತಿಮ ವಿನ್ಯಾಸ ನಕ್ಷೆ ಅನುಮೋದನೆ ಕೋರಿರುವ ಬಗ್ಗೆ.

**ಉಲ್ಲೇಖ :**
1. ಶ್ರೀ ಕೆ.ಜಿ.ರಂಗನಾಥ ಇವರ ಮನವಿ ದಿನಾಂಕ **24-08-2011**
2. ಮಾನ್ಯ ಜಿಲ್ಲಾಧಿಕಾರಿಗಳ ಕಛೇರಿಯ ಆದೇಶ ಸಂಖ್ಯೆ **ಎಎಲ್ಎನ್(ಟಿಎಂಕೆ) /ಸಿಆರ್/43/1996-97 ದಿನಾಂಕ 01-03-1997**
3. ದಿನಾಂಕ **29-09-2011** ರ ಪ್ರಾಧಿಕಾರದ ಸಭೆಯ ವಿಷಯ ಸಂಖ್ಯೆ **21** ರ ನಿರ್ಣಯ
4. ಪ್ರಾಧಿಕಾರಕ್ಕೆ ಪರಿಶೀಲನಾ ಶುಲ್ಕ, ಉದ್ಯಾನವನ ವಿನಾಯ್ತಿ ಶುಲ್ಕ, ಉತ್ತಮತೆ ಶುಲ್ಕ, ರಿಂಗ್ ರಸ್ತೆ ಉತ್ತಮತೆ ಕರ ಶುಲ್ಕ ಮತ್ತು ಲೈಸೆನ್ಸ್ ಶುಲ್ಕ ಪಾವತಿಸಿದ ರಸೀದಿ ಸಂಖ್ಯೆ **22420 ರೂ.18,75,529** (ಹದಿನೆಂಟು ಲಕ್ಷದ ಎಪ್ಪತ್ತೈದು ಸಾವಿರದ ಐದು ನೂರ ಇಪ್ಪತ್ತೊಂಭತ್ತು ರೂಪಾಯಿಗಳು ಮಾತ್ರ) ದಿನಾಂಕ **31-10-2011** ಮತ್ತು ಮೇಲ್ವಿಚಾರಣಾ ಶುಲ್ಕ ಪಾವತಿಸಿದ ರಸೀದಿ ಸಂಖ್ಯೆ **23411 ರೂ.42,200** (ನಲವತ್ತೆರಡು ಸಾವಿರದ ಎರಡು ನೂರು ರೂಪಾಯಿಗಳು ಮಾತ್ರ) ದಿನಾಂಕ **24-01-2012**
5. ಈ ಕಛೇರಿಯ ಪ್ರಾಥಮಿಕ ಅನುಮೋದನೆ ಆದೇಶ ಸಂಖ್ಯೆ ಟಿಯುಡಿಎ/ನಯೋ/ ವಿನ್ಯಾಸ/146/2011-12 ದಿನಾಂಕ 16-01-2012
6. ಪ್ರಾಥಮಿಕ ಅನುಮೋದನೆ ವಿನ್ಯಾಸ ನಕ್ಷೆಯಂತೆ ಅಭಿವೃದ್ಧಿ ಕಾರ್ಯಗಳನ್ನು ಪೂರ್ಣಗೊಳಿಸಿರುವ ಬಗ್ಗೆ ತಾಂತ್ರಿಕ ವಿಭಾಗದ ದೃಢೀಕರಣ ದಿನಾಂಕ 24-01-2012
7. ದಿನಾಂಕ **04-02-2012** ರ ಪ್ರಾಧಿಕಾರದ ಸಭೆಯ ವಿಷಯ ಸಂಖ್ಯೆ **13** ರ ನಿರ್ಣಯ
8. ರಸ್ತೆಗಳ ಪ್ರದೇಶವನ್ನು ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಿ ನೊಂದಾಯಿಸಿ ಕೊಟ್ಟಿರುವ ದಾನಪತ್ರದ ದಸ್ತಾವೇಜು ನಂ.**20954** ದಿನಾಂಕ **14-03-2012**
9. ಸರ್ಕಾರದ ಸುತ್ತೋಲೆಯ ಸಂಖ್ಯೆ ನಅಇ / 112 / ಬೆಂರೂಪ್ರಾ / 2005 ದಿನಾಂಕ 26-05-2005

* * * * *

**ಪ್ರಸ್ತಾವನೆ :-**

ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರಲ್ಲಿನ ಅರ್ಜಿದಾರರ ಮನವಿಯಲ್ಲಿ ತುಮಕೂರು ನಗರದ **ಗೆದ್ದಲಹಳ್ಳಿ** ಗ್ರಾಮದ ಸರ್ವೆ ನಂಬರ್ **25/7** ರಲ್ಲಿ **ಒಟ್ಟು 0-34.08 ಗುಂಟೆ** ಪ್ರದೇಶಕ್ಕೆ ವಸತಿ ವಿನ್ಯಾಸ ನಕ್ಷೆಯನ್ನು ಅನುಮೋದಿಸಲು ಕೋರಲಾಗಿದೆ.

ಉಲ್ಲೇಖ (3) ರ ನಿರ್ಣಯದಂತೆ, ಉಲ್ಲೇಖ (4) ರಲ್ಲಿ ಅರ್ಜಿದಾರರು ಶುಲ್ಕ ಪಾವತಿಸಿರುತ್ತಾರೆ. ಉಲ್ಲೇಖ (5) ರಲ್ಲಿ ಪ್ರಸ್ತಾವಿತ ಪ್ರದೇಶಕ್ಕೆ ಪ್ರಾಧಿಕಾರದಿಂದ ಪ್ರಾಥಮಿಕ ಅನುಮೋದನೆ ವಿನ್ಯಾಸ ನಕ್ಷೆ ತಯಾರಿಸಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಶೇಕಡ 60 ರಷ್ಟು ನಿವೇಶನಗಳನ್ನು ಮಾರಾಟಕ್ಕೆ ಬಿಡುಗಡೆ ಮಾಡಲಾಗಿತ್ತು. ಉಲ್ಲೇಖ (6) ರ ತಾಂತ್ರಿಕ ಶಾಖೆಯ ವರದಿಯಂತೆ ಬಡಾವಣೆಯಲ್ಲಿ ಡಾಂಬರೀಕರಣ, ಸಿವಿಲ್ ಅಭಿವೃದ್ಧಿ ಕೆಲಸಗಳು, ನೀರು ಸರಬರಾಜು ವ್ಯವಸ್ಥೆ, ಒಳಚರಂಡಿ ವ್ಯವಸ್ಥೆ, ವಿದ್ಯುತ್ ವ್ಯವಸ್ಥೆ ಮುಂತಾದ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲಾಗಿರುತ್ತದೆ.

ಉಲ್ಲೇಖ (8) ರಲ್ಲಿ ರಸ್ತೆಗಳ ಪ್ರದೇಶವನ್ನು ದಾನಪತ್ರದ ಮೂಲಕ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ತುಮಕೂರು ಇವರಿಗೆ ಹಸ್ತಾಂತರಿಸಲಾಗಿರುತ್ತದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ

1961 ರ ಕಲಂ 17(2) ರನ್ವಯ ಹಾಗೂ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987 ರ ಕಲಂ 34 ರಂತೆ ಅನುಮೋದಿಸಬಹುದಾಗಿರುತ್ತದೆ. ಉಲ್ಲೇಖ (9) ರ ಸರ್ಕಾರದ ಸುತ್ತೋಲೆಯಂತೆ ವಿನ್ಯಾಸದ ಶೇಕಡ 60 ರಷ್ಟು ನಿವೇಶನಗಳು ಅಂದರೆ 01, 02, 03, 04, 05, 06, 07, 08, 09 ಮತ್ತು 10 ನಿವೇಶನಗಳನ್ನು ಉಲ್ಲೇಖ (5) ರ ಪ್ರಾಧಿಕಾರದ ಆದೇಶದಂತೆ ಬಿಡುಗಡೆಗೊಳಿಸಲಾಗಿತ್ತು. ಉಳಿದ ಶೇಕಡ 40 ರಷ್ಟು ನಿವೇಶನಗಳು ಅಂದರೆ 11, 12, 13 ಮತ್ತು 14 ನಿವೇಶನಗಳನ್ನು ಬಿಡುಗಡೆಗೊಳಿಸಿ ಅಂತಿಮ ವಿನ್ಯಾಸ ಅನುಮೋದನೆಯಾಗಬೇಕಾಗಿದ್ದು, ಕೆಳಕಂಡಂತೆ ಆದೇಶಿಸಿದೆ.

ನಗರಾಭಿವೃದ್ಧಿ ಪ್ರಾಧಿಕಾರ ಕಛೇರಿ
ಬೆಳಗುಂಬ ರಸ್ತೆ, ತುಮಕೂರು.

ಸಂಖ್ಯೆ ತುನಪ್ರಾ/ನಯೋ/ವಿನ್ಯಾಸ/146/2011-12 ದಿನಾಂಕ 21-03-2012

ಅಂತಿಮ ವಿನ್ಯಾಸ ನಕ್ಷೆ ದೃಢೀಕರಣ

## ಆದೇಶ

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರದ ಸುತ್ತೋಲೆಯ ಸಂಖ್ಯೆ ನಅಇ / 112 / ಬೆಂರೂಪ್ರಾ / 2005 ದಿನಾಂಕ 26-05-2005 ರಂತೆ ತುಮಕೂರು ನಗರದ **ಗೆದ್ದಲಹಳ್ಳಿ** ಗ್ರಾಮದ ಸರ್ವೆ ನಂಬರ್ **25/7** ರಲ್ಲಿ **ಒಟ್ಟು 0-34.08 ಗುಂಟೆ** ಪ್ರದೇಶದಲ್ಲಿ ರಚಿಸಲಾಗಿರುವ ವಸತಿ ಉದ್ದೇಶದ ವಿನ್ಯಾಸವನ್ನು ಅಂತಿಮವಾಗಿ ಅನುಮೋದಿಸಿದೆ. ಈ ವಿನ್ಯಾಸದಲ್ಲಿನ ಶೇಕಡ 40 ರಷ್ಟು ನಿವೇಶನಗಳ ಸಂಖ್ಯೆ ಅಂದರೆ 11, 12, 13 ಮತ್ತು 14 ಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ಈ ಅಂತಿಮ ವಿನ್ಯಾಸ ಅನುಮೋದನೆ ಮತ್ತು ನಿವೇಶನ ಬಿಡುಗಡೆಯು ಈ ಕೆಳಕಂಡ ಷರತ್ತಿಗೊಳಪಟ್ಟಿರುತ್ತದೆ.

**ನಿಂಬಧನೆಗಳು:-**

1. ವಿನ್ಯಾಸದಲ್ಲಿನ ನಿವೇಶನಗಳನ್ನು ಅನುಮೋದಿಸಲಾದ ಉದ್ದೇಶಕ್ಕೆ ಉಪಯೋಗಿಸತಕ್ಕದ್ದು. ನಿವೇಶನಗಳನ್ನು ಉಪವಿಭಜಿಸುವುದು / ಒಟ್ಟು ಗೂಡಿಸುವುದನ್ನು, ಅಳತೆಗಳನ್ನು ಮಾರ್ಪಾಡು ಮಾಡುವುದನ್ನಾಗಲೀ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಮಾಡತಕ್ಕದ್ದಲ್ಲ.
2. ವಿನ್ಯಾಸದಲ್ಲಿ ವಸತಿಗಾಗಿ **2185.30** ಚ.ಮೀ. (ಶೇಕಡ **62.59**); ರಸ್ತೆಗಳಿಗೆ **1306.38** ಚ.ಮೀ. (ಶೇಕಡ **37.41**) ಪ್ರದೇಶ ನಿಗಧಿಪಡಿಸಿದೆ. ವಸತಿ ವಿಸ್ತೀರ್ಣದಲ್ಲಿ ಅನುಮೋದಿತ ನಕ್ಷೆಯಲ್ಲಿ ತೋರಿಸಿರುವಂತೆ ಅನಿಯಮಿತ ಅಳತೆಯ **01** ನಿವೇಶನಗಳಿರುತ್ತವೆ.
3. ನಿವೇಶನಗಳಲ್ಲಿ ಕಟ್ಟಡ ನಿರ್ಮಾಣಕ್ಕೆ ಮೊದಲು ಸ್ಥಳೀಯ ಸಂಸ್ಥೆಯಿಂದ ಅಗತ್ಯ ಕಟ್ಟಡ ಪರವಾನಗಿ / ಪ್ರಾರಂಭಿಕ ಪ್ರಮಾಣ ಪತ್ರ ಪಡೆದು ಅನುಮೋದಿತ ಕಟ್ಟಡ ನಕ್ಷೆಯಂತೆಯೇ ಕಟ್ಟಡ ನಿರ್ಮಿಸತಕ್ಕದ್ದು.
4. ಮೇಲ್ಕಂಡ ಯಾವುದೇ ನಿಬಂಧನೆಯನ್ನಾದರೂ ಪಾಲಿಸದೇ ಇದ್ದಲ್ಲಿ; ನೀಡಲಾದ ಮಾಹಿತಿ / ದಾಖಲಾತಿ ತಪ್ಪು ಎಂದು ಕಂಡು ಬಂದಲ್ಲಿ ವಿನ್ಯಾಸವನ್ನು ಯಾವುದೇ ತಿಳುವಳಿಕೆ ನೀಡದೇ ರದ್ದುಪಡಿಸುವ ಅಥವಾ ಇತರೇ ಯಾವುದೇ ನಿಬಂಧನೆ ವಿಧಿಸುವ ಅಧಿಕಾರ ಪ್ರಾಧಿಕಾರಕ್ಕೆ ಇರುತ್ತದೆ.
5. ವಿನ್ಯಾಸ ಪ್ರದೇಶದ ಗಡಿಗಳು, ನಿವೇಶನದ ಗಡಿಗಳಿಗೆ ಸಂಬಂಧಿಸಿದಂತೆ ಯಾವುದೇ ತಂಟೆ ತಕರಾರು ಉಂಟಾದಲ್ಲಿ ವಿನ್ಯಾಸ/ನಿವೇಶನ ಮಾಲೀಕರೇ ತಮ್ಮ ಸ್ವಂತ ಜವಾಬ್ದಾರಿಯಲ್ಲಿ ಬಗೆಹರಿಸಿಕೊಳ್ಳತಕ್ಕದ್ದು ಹಾಗೂ ಈ ಅನುಮತಿಯ ಸಿವಿಲ್ ವ್ಯಾಜ್ಯಗಳಿಗೆ ಹೊರತಾಗಿದೆ.

ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ,
ತುಮಕೂರು.

ರವಾನಿಸಿದೆ. ದಿನಾಂಕ: 21-04-2011

**ಶ್ರೀ ಕೆ.ಜಿ.ರಂಗನಾಥ್**
ಬಿನ್ ಕೆ.ಸಿ.ಗೋಪಾಲಯ್ಯ
ಕಂಬದಹಳ್ಳಿ, ತುಂಬಾಡಿ ಅಂಚೆ,
ಕೊರಟಗೆರೆ ತಾಲ್ಲೂಕು,
ತುಮಕೂರು ಜಿಲ್ಲೆ.

**ಪ್ರತಿಯನ್ನು :-**

1. ಪೌರಾಯುಕ್ತರು, ನಗರಸಭೆ, ತುಮಕೂರು ಇವರಿಗೆ ವಿನ್ಯಾಸ ನಕ್ಷೆಯೊಂದಿಗೆ ರವಾನಿಸುತ್ತಾ ವಿನ್ಯಾಸದ ನಕ್ಷೆಯಂತೆ ನಿಯಮಾನುಸಾರ ನಿವೇಶನಗಳ ಖಾತಾ ಮಾಡಬಹುದು ಹಾಗೂ ಕಟ್ಟಡ ನಿರ್ಮಾಣಕ್ಕೆ ಅನುಮತಿಸಬಹುದೆಂದು ತಿಳಿಸಲಾಗಿದೆ.
2. ಉಪನೊಂದಣಾಧಿಕಾರಿಗಳು, ತುಮಕೂರು ತಾಲ್ಲೂಕು, ತುಮಕೂರು ರವರಿಗೆ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಪ್ರತಿ.



KEY PLAN




SCALE 1:600

## LAND USE ANALYSIS

| USE | AREA IN SQ M | % |
|---|---|---|
| RESIDENTIAL | 2185.30 | 62.59 |
| ROAD | 1306.38 | 37.41 |
| TOTAL | 3263.96 | 100.00 |

OWNE: K.G.RANGANATH

**GOVERNMENT OF KARNATAKA**
TUMKUR URBAN DEVELOPMENT AUTHORITY
TUMKUR

21/3/2012
TOWN PLANNING MEMBER
T U D A
TUMKUR

COMMISSIONER
T U D A
TUMKUR

DRN BY | CKD BY | DRG NO 474

TITLE: APPROVED RESIDENTIAL LAY OUT PLAN IN SY NO 25/7 OF GEDDALAHALLI TUMKUR

EXTENT : 0A - 34.5 GTS